ದೂರವಾಣಿ : 080 - 22263479

ಬೆಂ.ಮ.ಪ್ರ.ಪ್ರಾ

# ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರ

ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ನಂ. 1, ಆಲಿ ಆಸ್ಕರ್ ರಸ್ತೆ, ಬೆಂಗಳೂರು – 560 052.

ದಿನಾಂಕ: 11.08.2021.

ಸಂಖ್ಯೆ : STRRPA/TP/SP-LAO/51/2017-18

## ವಸತಿ ಉದ್ದೇಶದ ಏಕನಿವೇಶನ ವಿನ್ಯಾಸ ನಕ್ಷೆ ಅನುಮೋದನಾ ಪತ್ರ

**ವಿಷಯ:** ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಸರ್ಜಾಪುರ ಗ್ರಾಮದ ಸ.ನಂ.397/2ರಲ್ಲಿ 1ಎಕರೆ–28ಗುಂಟೆ ವಿಸ್ತೀರ್ಣ ಪ್ರದೇಶದಲ್ಲಿ ವಸತಿ ಉದ್ದೇಶದ ಏಕನಿವೇಶನ ವಿನ್ಯಾಸ ನಕ್ಷೆ ಅನುಮೋದನೆ ಕೋರಿರುವ ಬಗ್ಗೆ.

**ಉಲ್ಲೇಖ:**
1. ಮೆ॥ ಎಸ್2 ಹೋಮ್ಸ್ ಇವರ ದಿನಾಂಕ: 03.02.2021ರ ಅರ್ಜಿ.
2. ದಿನಾಂಕ: 09.02.2021ರಂದು ನಡೆದ ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರದ 20ನೇ ಸಭೆಯ ವಿಷಯ ಸಂಖ್ಯೆ: 20.58ರ ನಡವಳಿಕೆ.
3. ಶುಲ್ಕ ಪಾವತಿ ರಸೀದಿ ಸಂಖ್ಯೆ: 2625, 2626 ದಿನಾಂಕ: 20.04.2021.
4. ಉಪನಗರ ವರ್ತುಲ ರಸ್ತೆ ಭೂಬ್ಯಾಂಕ್‌ಗಾಗಿ ಕಾಯ್ದಿರಿಸಿದ ಜಾಗದ ಪರಿತ್ಯಾಜನಾ ಪತ್ರ ದಿನಾಂಕ: 06.07.2021.
5. ರಸ್ತೆಗಾಗಿ ಕಾಯ್ದಿರಿಸಿದ ಜಾಗದ ಪರಿತ್ಯಾಜನಾ ಪತ್ರ ದಿನಾಂಕ: 30.07.2021.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರಲ್ಲಿನ ಅರ್ಜಿಯಲ್ಲಿ ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಸರ್ಜಾಪುರ ಗ್ರಾಮದ ಸ.ನಂ.397/2ರಲ್ಲಿ 1ಎಕರೆ–28ಗುಂಟೆ ವಿಸ್ತೀರ್ಣ ಪ್ರದೇಶದಲ್ಲಿ ವಸತಿ ಉದ್ದೇಶದ ಏಕನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ ಕೋರಲಾಗಿತ್ತು. ಉಲ್ಲೇಖ (2)ರಲ್ಲಿನ ದಿನಾಂಕ: 09.02.2021ರಂದು ನಡೆದ ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರದ 20ನೇ ಸಭೆಯ ವಿಷಯ ಸಂಖ್ಯೆ: 20.58ರ ನಡವಳಿಕೆಯಲ್ಲಿ ವಸತಿ ಉದ್ದೇಶದ ಏಕನಿವೇಶನ ವಿನ್ಯಾಸ ನಕ್ಷೆ ಅನುಮೋದಿಸಲು ತೀರ್ಮಾನಿಸಲಾಗಿರುತ್ತದೆ. ಅರ್ಜಿದಾರರು ಉಲ್ಲೇಖ (3)ರಲ್ಲಿ ನಿಗಧಿತ ಶುಲ್ಕವನ್ನು ಪ್ರಾಧಿಕಾರಕ್ಕೆ ಪಾವತಿಸಲಾಗಿದೆ.

ಉಲ್ಲೇಖ (4)ರಲ್ಲಿನ ನೋಂದಾಯಿತ ಪರಿತ್ಯಾಜನಾ ಪತ್ರದ ರೀತ್ಯ ವಸತಿ ಉದ್ದೇಶದ ಏಕನಿವೇಶನ ವಿನ್ಯಾಸ ನಕ್ಷೆಯಲ್ಲಿನ ಉಪನಗರ ವರ್ತುಲ ರಸ್ತೆ ಭೂಬ್ಯಾಂಕ್ ಪ್ರದೇಶವನ್ನು ಯೋಜನಾ ಪ್ರಾಧಿಕಾರಕ್ಕೆ ನೊಂದಾಯಿತ ಪರಿತ್ಯಾಜನಾ ಪತ್ರದ ಮುಖಾಂತರ ಹಸ್ತಾಂತರಿಸಲಾಗಿರುತ್ತದೆ. ಅಲ್ಲದೇ ಉಲ್ಲೇಖ (5)ರಲ್ಲಿನ ನೋಂದಾಯಿತ ಪರಿತ್ಯಾಜನಾ ಪತ್ರದ ರೀತ್ಯ ವಸತಿ ಉದ್ದೇಶದ ಏಕನಿವೇಶನ ವಿನ್ಯಾಸ ನಕ್ಷೆಯಲ್ಲಿನ ರಸ್ತೆಗಾಗಿ ಕಾಯ್ದಿರಿಸಿದ ಜಾಗವನ್ನು ಸರ್ಜಾಪುರ ಗ್ರಾಮಪಂಚಾಯಿತಿಗೆ ಮುಫತ್ತಾಗಿ ನೊಂದಾಯಿತ ಪರಿತ್ಯಾಜನಾ ಪತ್ರದ ಮುಖಾಂತರ ಹಸ್ತಾಂತರಿಸಲಾಗಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಸರ್ಜಾಪುರ ಗ್ರಾಮದ ಸ.ನಂ.397/2ರಲ್ಲಿ 1ಎಕರೆ–28ಗುಂಟೆ ವಿಸ್ತೀರ್ಣ ಪ್ರದೇಶದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17ರ ಅಡಿಯಲ್ಲಿ ವಸತಿ ಉದ್ದೇಶದ ಏಕನಿವೇಶನ ವಿನ್ಯಾಸ ನಕ್ಷೆಯನ್ನು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮೋದಿಸಲಾಗಿದೆ.

## ಷರತ್ತುಗಳು

1) ಪ್ರಾಧಿಕಾರವು ಅನುಮೋದಿಸಿರುವ ಏಕ ನಿವೇಶನ ವಿನ್ಯಾಸ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಉಪವಿಭಜನೆ ಅಥವಾ ಯಾವುದೇ ಬದಲಾವಣೆ ಮಾಡುವಂತಿಲ್ಲ.

..2..

Scanned with CamScanner

2) ಕಟ್ಟಡ ನಕ್ಷೆಗಳನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 15ರ ಅಡಿಯಲ್ಲಿ ಯೋಜನಾ ಪ್ರಾಧಿಕಾರದಿಂದ ಅನುಮೋದಿಸಿಕೊಳ್ಳುವುದು.

3) ನಿವೇಶನವನ್ನು ವಸತಿ ಉದ್ದೇಶಕ್ಕೆ ಮಾತ್ರ ಉಪಯೋಗಿಸತಕ್ಕದ್ದು, ಅನ್ಯ ಉದ್ದೇಶಕ್ಕೆ ಬಳಸುವುದನ್ನು ನಿಷೇಧಿಸಿದೆ.

4) ಕುಡಿಯುವ ನೀರು ಹಾಗೂ ತ್ಯಾಜ್ಯ ನೀರು ವಿಲೇವಾರಿ ಮತ್ತು ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸುವುದು. ಕುಡಿಯುವ ನೀರು ಪೂರೈಕೆ ಬಗ್ಗೆ ಅರ್ಜಿದಾರರು ಖಾತ್ರಿಪಡಿಸುವುದು.

5) ಏಕ ನಿವೇಶನ ವಿನ್ಯಾಸ ನಕ್ಷೆಯಲ್ಲಿ ಅರ್ಜಿದಾರರು ಕಡ್ಡಾಯವಾಗಿ ಮಳೆನೀರು ಕೊಯ್ಲಿಗೆ ಸಂಬಂಧಿಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಬೀಳುವ ಮಳೆನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ಧಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು.

6) ಪ್ರಾಧಿಕಾರವು ಅನುಮೋದಿಸಿರುವ ಏಕ ನಿವೇಶನ ವಿನ್ಯಾಸ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆ ಮಾಡುವಂತಿಲ್ಲ.

7) ವಿವರವಾದ ಕಟ್ಟಡ ನಕ್ಷೆಗಳನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 15ರ ಅಡಿಯಲ್ಲಿ ಯೋಜನಾ ಪ್ರಾಧಿಕಾರದಿಂದ ಅನುಮೋದಿಸಿಕೊಳ್ಳುವುದು.

8) ಕಟ್ಟಡ ಕಾಮಗಾರಿ ಪ್ರಾರಂಭವಾದ ನಂತರ ಕಟ್ಟಡ ಸುರಕ್ಷತೆಯ ಬಗ್ಗೆ ಸಂಬಂಧಿಸಿನ ಸಕ್ಷಮ ಪ್ರಾಧಿಕಾರದಿಂದ ಪರಿಶೀಲಿಸಿಕೊಳ್ಳತಕ್ಕದ್ದು.

9) ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಪೂರ್ವದಲ್ಲಿ ಅಗತ್ಯ ಶುಲ್ಕವನ್ನು ಯೋಜನಾ ಪ್ರಾಧಿಕಾರಕ್ಕೆ/ಸ್ಥಳೀಯ ಸಂಸ್ಥೆಗೆ ಪಾವತಿಸತಕ್ಕದ್ದು.

10) ಸದರಿ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ಥೆಯಲ್ಲಿ ಅಡಚಣೆಯುಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು, ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು.

11) ಅಗ್ನಿಶಾಮಕ ಇಲಾಖೆ, ವೈಮಾನಿಕ ಇಲಾಖೆ, ಸ್ಥಳೀಯ ಸಂಸ್ಥೆ, ಬೆಸ್ಕಾಂ ಹಾಗೂ ಕೆ.ಎಸ್.ಪಿ.ಸಿ.ಬಿ. ಮಂಡಳಿ/ ಇಲಾಖೆಗಳ ನಿರಾಕ್ಷೇಪಣಾ ಪತ್ರಗಳನ್ನು ಯೋಜನಾ ಪ್ರಾಧಿಕಾರವು ಪಡೆದು ಕಟ್ಟಡ ನಕ್ಷೆ ಮಂಜೂರಾತಿ ನೀಡುವುದು.

12) ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಸರ್ಕಾರಿ ಅಥವಾ ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಅನುಮೋದಿತ ಏಕ ನಿವೇಶನ ವಿನ್ಯಾಸ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ.

13) ಪ್ರಶ್ನಿತ ಜಮೀನಿನಲ್ಲಿನ ನಾಲಾ, ಕಾಲುದಾರಿ, ಬಂಡಿದಾರಿ ಇತ್ಯಾದಿ 'ಬಿ' ಖರಾಬು ಜಮೀನುಗಳನ್ನು ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

14) ಏಕ ನಿವೇಶನ ವಿನ್ಯಾಸ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ ದಾಖಲಾತಿ ನೀಡಿದ್ದಲ್ಲಿ ಏಕ ನಿವೇಶನ ವಿನ್ಯಾಸ ನಕ್ಷೆಯ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ.

15) ಏಕ ನಿವೇಶನ ವಿನ್ಯಾಸ ನಕ್ಷೆಯಲ್ಲಿನ ಘನತ್ಯಾಜ್ಯಗಳನ್ನು ಪ್ಲಾಸ್ಟಿಕ್ ಮತ್ತು ಇತ್ಯಾದಿಯಾಗಿ ವಿಂಗಡಿಸಿ, Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು.

16) ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 209 ಬಿಎಂಆರ್ 2016, ದಿನಾಂಕ: 31.03.2017 ರ ರೀತ್ಯ ಪತ್ರಿಕೆ, ಮಾಧ್ಯಮ, ಜಾಹೀರಾತು ಪ್ರಕಟಣೆಗಳಲ್ಲಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಹೆಸರನ್ನು ದುರ್ಬಳಕೆ ಮಾಡಿಕೊಳ್ಳುವಂತಿಲ್ಲ. ತಪ್ಪು ಮಾಹಿತಿ ಪ್ರಕಟಿಸದೇ ಅನುಮೋದನೆ ಪಡೆದುಕೊಂಡಿರುವ ಯೋಜನಾ ಪ್ರಾಧಿಕಾರದ ಹೆಸರನ್ನು ಮಾತ್ರ ನಮೂದಿಸತಕ್ಕದ್ದು.

..3..

Scanned with CamScanner

17) ಉಪನಗರ ವರ್ತುಲ ರಸ್ತೆ ಯೋಜನಾ ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು.

18) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ರಚಿಸಿರುವ Direction under section 18(1)(b) of Water (Prevention & Control of Pollution) Act, 1974ರ ಕಾಯ್ದೆಯಲ್ಲಿ ರೂಪಿಸಿರುವ ನಿಯಮದಂತೆ ಕ್ರಮ ಕೈಗೊಳ್ಳಲು ಸೂಚಿರುವಂತೆ ಈ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ.

   i. ರಾಜ ಕಾಲುವೆಯನ್ನು ಮುಚ್ಚದಂತೆ ಕ್ರಮವಹಿಸುವುದು

   ii. ರಾಜಕಾಲುವೆಗಳಿಗೆ ಯಾವುದೇ ಕೊಳಚೆ ನೀರು ಹಾಗೂ ಇನ್ನಿತರೆ ತ್ಯಾಜ್ಯ ವಸ್ತುಗಳು ಸೇರ್ಪಡೆಯಾಗದಂತೆ ಕ್ರಮವಹಿಸುವುದು

   iii. ಕಂದಾಯ ಇಲಾಖೆಯ ದಾಖಲೆಗಳಂತೆ ಇರುವ ರಾಜ ಕಾಲುವೆಗಳ ಅಳತೆಗಳನ್ನು ಅತಿಕ್ರಮ/ಒತ್ತುವರಿ ಆಗದಂತೆ ಯಥಾವತ್ತಾಗಿ ಕಾಯ್ದಿರಿಸಿಕೊಂಡು ಸರಾಗವಾಗಿ ನೀರು ಹರಿಯಲು ಬೇಕಾದ ಕ್ರಮವಹಿಸುವುದು.

   iv. ರಾಜ ಕಾಲುವೆಗಳು Silt ಆಗದಂತೆ ಹಾಗೂ ತೆರದ ಸ್ಥಿತಿಯಲ್ಲಿ ಸ್ವಚ್ಛವಾಗಿರುವಂತೆ ಕ್ರಮವಹಿಸುವುದು.

19) ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರೆ ಯಾವುದೇ ಪ್ರಾಧಿಕಾರದವು ವಿಧಿಸಿರುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ಏಕನಿವೇಶನ ವಿನ್ಯಾಸ ಮಂಜೂರಾತಿಯು ಯಾವ ಪೂರ್ವ ಸೂಚನೆಯೂ ಇಲ್ಲದೇ ಕೂಡಲೇ ರದ್ದಾಗುವುದು.

1/8/2011

ಸದಸ್ಯ ಕಾರ್ಯದರ್ಶಿಗಳು
ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ
ಜಂಟಿ ನಿರ್ದೇಶಕರು,
ಉಪನಗರ ವರ್ತುಲ ರಸ್ತೆ (STRR) ಯೋಜನಾ
ಪ್ರಾಧಿಕಾರ, ಬೆಂಗಳೂರು.

**ಇವರಿಗೆ,**
ಮೆ॥ ಎಸ್2 ಹೋಮ್ಸ್
ಇದರ ಪರವಾಗಿ ಶ್ರೀ ಚೇತನ್‌ಕುಮಾರ್,
ನಂ.58/1, 2ನೇ ಮಹಡಿ,
80 ಅಡಿ ರಸ್ತೆ, 8ನೇ ಬ್ಲಾಕ್,
ಕೋರಮಂಗಲ,
ಬೆಂಗಳೂರು-560 095.

Scanned with CamScanner